# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಎಚ್. ರಸ್ತೆ, ತುಮಕೂರು - 572 103

ಸಂಖ್ಯೆ:ತುವಿ:ಸಿಬ್ಬಂದಿ-2019-20 ದಿನಾಂಕ:23.03.2020

## -: ಸುತ್ತೋಲೆ : -

ವಿಷಯ : Novel Corona Virus (COVID-19) ವೈರಸ್ ಸೋಂಕು ತಡೆಗಟ್ಟುವಿಕೆಗೆ ಮುಂಜಾಗ್ರತಾ ಕ್ರಮವಾಗಿ ತುಮಕೂರು ವಿಶ್ವವಿದ್ಯಾನಿಲಯದ ಬೋಧಕರು ಮತ್ತು ಬೋಧಕೇತರ ಸಿಬ್ಬಂದಿಯವರಿಗೆ ರಜೆ ಘೋಷಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 139 ಯುಎನಿ 2020, ದಿನಾಂಕ: 23.03.2020
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 23.03.2020

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ Novel Corona Virus (COVID-19) ವೈರಸ್ ಸೋಂಕು ತಡೆಗಟ್ಟುವಿಕೆಗೆ ಮುಂಜಾಗ್ರತಾ ಕ್ರಮವಾಗಿ ಉಲ್ಲೇಖಿತ ಸುತ್ತೋಲೆಗಳಲ್ಲಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

1. ವಿಶ್ವವಿದ್ಯಾನಿಲಯದ ಎಲ್ಲಾ ಬೋಧಕ/ಬೋಧಕೇತರ ಸಿಬ್ಬಂದಿ/ಸಂಶೋಧಕರು ಹಾಗೂ ಇತರೆ ಎಲ್ಲಾ ಸಿಬ್ಬಂದಿಗಳು ದಿನಾಂಕ: 31.03.2020ರವರೆಗೆ ಮನೆಯಿಂದಲೇ ಶಾಲಾ-ಕಾಲೇಜು ಕರ್ತವ್ಯ ನಿರ್ವಹಿಸಲು ಅನುಮತಿ ನೀಡುವುದು.

2. ಶಿಕ್ಷಕರು/ಬೋಧಕ ಸಿಬ್ಬಂದಿಗಳು ಈ ಅವಧಿಯಲ್ಲಿ ಈ ಕೆಳಕಂಡ ಶೈಕ್ಷಣಿಕ ಚಟುವಟಿಕೆಗಳನ್ನು ತೊಡಗಿಸಿಕೊಳ್ಳುವುದು.

   (ಅ) ಆನ್‌ಲೈನ್ ಮೂಲಕ ಬೋಧನೆ ಮತ್ತು ಆನ್‌ಲೈನ್ ಮೂಲಕ ಮೌಲ್ಯಮಾಪನ ಮಾಡಲು ಅಗತ್ಯವಿರುವ ಪಠ್ಯವಸ್ತು ಅಭಿವೃದ್ಧಿಪಡಿಸುವುದು.
   (ಆ) ಮುಂದಿನ ಶೈಕ್ಷಣಿಕ ವರ್ಷಕ್ಕೆ ಅಗತ್ಯವಿರುವ ಪಠ್ಯಯೋಜನೆ/ಟಿಪ್ಪಣಿಯನ್ನು ಸಿದ್ಧಪಡಿಸುವುದು ಹಾಗೂ ತಾವು ಬೋಧಿಸುವ ವಿಷಯದ ಪಠ್ಯವಸ್ತುವನ್ನು ಅಭಿವೃದ್ಧಿಪಡಿಸುವುದು.
   (ಇ) ಲೇಖನಗಳನ್ನು, ಪತ್ರಿಕೆಗಳನ್ನು ಬರೆಯುವುದು.
   (ಈ) ಆಗಿ ವಿನೂತನವಾದ ಪ್ರಶ್ನೆಗಳನ್ನು ಸಿದ್ಧಪಡಿಸುವುದು.
   (ಉ) ಏಕ್ ಭಾರತ್ ಶ್ರೇಷ್ಠ ಭಾರತ್ ಕಾರ್ಯಕ್ರಮಕ್ಕೆ ವಿನೂತನ ಯೋಜನೆಯನ್ನು ಸಿದ್ಧಪಡಿಸುವುದು.

3. ದಿನಾಂಕ: 31.03.2020ರಂದು ಬೋಧಕ ಮತ್ತು ಬೋಧಕೇತರ ಸಿಬ್ಬಂದಿ/ಸಂಶೋಧಕರು, ಗುತ್ತಿಗೆ/ಗೌರವ ಶಿಕ್ಷಕರು ಸೇರಿದಂತೆ ಎಲ್ಲಾ ಸಿಬ್ಬಂದಿ ವರ್ಗದವರ ರಜಾ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸುವುದು.

4. ಹಾಸ್ಟೆಲ್‌ಗಳಲ್ಲಿ/ಹಾಗೂ ವಸತಿಶಾಲೆಗಳಲ್ಲಿ ಉಳಿದುಕೊಂಡಿರುವ ವಿದೇಶಿ ವಿದ್ಯಾರ್ಥಿಗಳು ಇದ್ದಲ್ಲಿ ಮಾತ್ರ ಸದರಿ ಹಾಸ್ಟೆಲ್/ವಸತಿ ಶಾಲೆಗಳಲ್ಲಿಯೇ ಉಳಿದುಕೊಳ್ಳಲು ಅಗತ್ಯ ಸೌಲಭ್ಯಗಳನ್ನು ಒದಗಿಸುವುದು ಹಾಗೂ ಅವರ ಸುರಕ್ಷತೆಗಾಗಿ ಎಲ್ಲಾ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು.

5. ಬೋಧಕ/ಬೋಧಕೇತರ ಸಿಬ್ಬಂದಿ/ಸಂಶೋಧಕರು/ಗುತ್ತಿಗೆ/ಗೌರವ ಶಿಕ್ಷಕರು ಸೇರಿದಂತೆ ಎಲ್ಲಾ ಸಿಬ್ಬಂದಿ ವರ್ಗದವರನ್ನು ತುರ್ತು ಪರಿಸ್ಥಿತಿಯಲ್ಲಿ ಸಂಪರ್ಕಿಸಲು ಅವರ ದೂರವಾಣಿ ಸಂಖ್ಯೆಗಳನ್ನು/ಇ-ಮೇಲ್ ವಿಳಾಸಗಳನ್ನು ವಿಭಾಗದ ಮುಖ್ಯಸ್ಥರು ಪಡೆದುಕೊಳ್ಳುವುದು.

6. **ಈ ರಜಾ ಅವಧಿಯಲ್ಲಿ ಬೋಧಕ ಸಿಬ್ಬಂದಿ/ಸಂಶೋಧಕರು/ಗುತ್ತಿಗೆ/ಅತಿಥಿ ಉಪನ್ಯಾಸಕರು ಮತ್ತು ಖಾಯಂ, ಸಂಚಿತ ವೇತನ ಹಾಗೂ ಹೊರಗುತ್ತಿಗೆ ಬೋಧಕೇತರ ಸಿಬ್ಬಂದಿಗಳು ಯಾವುದೇ ಕಾರಣಕ್ಕೂ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ ಹಾಗೂ ಸರ್ಕಾರಕ್ಕೆ/ವಿಶ್ವವಿದ್ಯಾನಿಲಯಕ್ಕೆ**

ಬೋಧಕ/ಬೋಧಕೇತರ ಸಿಬ್ಬಂದಿಯವರ ಸೇವೆ ಅಗತ್ಯವಿದ್ದಾಗ ಕಡ್ಡಾಯವಾಗಿ ಸೇವೆಗೆ ಹಾಜರಾಗತಕ್ಕದ್ದು.

ಈ ಸುತ್ತೋಲೆಯಲ್ಲಿ ಸೂಚಿಸಿರುವ/ನಿರ್ವಹಿಸಬೇಕಾದ ಕಾರ್ಯಗಳನ್ನು ಬೋಧಕರು ಮನೆಯಿಂದಲೇ ನಿರ್ವಹಿಸಲು ಸೂಚಿಸಿದೆ.

23/03

ಕುಲಸಚಿವರು

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ

1. ಕುಲಸಚಿವರು (ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಕಾರ್ಯಪಾಲಕ ಅಭಿಯಂತರರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಎಲ್ಲಾ ಅಧ್ಯಕ್ಷರು/ಸಂಯೋಜಕರು, ಸ್ನಾತಕೋತ್ತರ ವಿಭಾಗಗಳು, ತು.ವಿ.ತು.
5. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತು.ವಿ.ತು.
6. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತು.ವಿ.ತು.

(ಸದರಿ ಸುತ್ತೋಲೆಯನ್ನು ವಿದ್ಯಾರ್ಥಿಗಳ ಗಮನಕ್ಕೆ ತರುವುದು.)

7. ಗ್ರಂಥಪಾಲರು (ಪ್ರಭಾರ), ವಿಶ್ವವಿದ್ಯಾನಿಲಯ ಗ್ರಂಥಾಲಯ, ತು.ವಿ.ತು.
8. ಮೇಲ್ವಿಚಾರಕರು, ವಿಶ್ವವಿದ್ಯಾನಿಲಯ ಅತಿಥಿಗೃಹ, ತು.ವಿ.ತು.
9. ಸಂಯೋಜಕರು, ಕ್ರೀಡಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ
10. ನಿರ್ದೇಶಕರು, ಡಾ. ಅಂಬೇಡ್ಕರ್ ಅಧ್ಯಯನ ಕೇಂದ್ರ, ತು.ವಿ.ತು.
11. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ, ತು.ವಿ.ತು.
12. ನಿರ್ದೇಶಕರು, ಸಂಶೋಧನೆ, ತುಮಕೂರು ವಿಶ್ವವಿದ್ಯಾನಿಲಯ
13. ಸಂಯೋಜನಾಧಿಕಾರಿ, ಎನ್.ಎಸ್.ಎಸ್. ಘಟಕ, ತು.ವಿ.ತು.
14. ಮುಖ್ಯ ನಿಲಯಪಾಲಕರು, ಎಲ್ಲಾ ಸ್ನಾತಕ/ಸ್ನಾತಕೋತ್ತರ ವಿದ್ಯಾರ್ಥಿನಿಲಯಗಳು, ತು.ವಿ.ತು.
15. ಎಲ್ಲಾ ವಿಭಾಗಗಳ ಉಪಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ
16. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ತುಮಕೂರು ವಿಶ್ವವಿದ್ಯಾನಿಲಯ
17. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
18. ಕಚೇರಿ ಪ್ರತಿ.

ಪ್ರತಿ :

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು